# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಉಂಟಾಗುವ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಪರಿಹಾರವನ್ನು ನೀಡುವ ಬಗ್ಗೆ.

*****

**ಪ್ರಸ್ತಾವನೆ:**

ಭಾರತೀಯ ಹವಾಮಾನ ಇಲಾಖೆಯು ದಿನಾಂಕ: 15.04.2024 ರಂದು ನೀಡಿರುವ ಮುನ್ಸೂಚನೆಯಲ್ಲಿ ನೈಋತ್ಯ ಮುಂಗಾರು-2024 ರ ಮೊದಲ ಹಂತದ ಕಾರ್ಯಚರಣೆಯ ಧೀರ್ಘ ವ್ಯಾಪ್ತಿಯ ಮುನ್ಸೂಚನೆಯ (LRF) ಪ್ರಕಾರ ಒಟ್ಟಾರೆಯಾಗಿ ದೇಶದಾದ್ಯಂತ ಮಳೆಯು ವಾಡಿಕೆಗಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದ್ದು, ಅದರಂತೆ ಈಗಾಗಲೇ ರಾಜ್ಯದಲ್ಲಿ 2024ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿವಿಧ ಜಿಲ್ಲೆಗಳಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಇದರಿಂದಾಗಿ ಹಲವಾರು ಮನೆ ಹಾನಿ / ಗೃಹೋಪಯೋಗಿ ವಸ್ತುಗಳು ಹಾನಿಯಾಗಿರುವುದು ವರದಿಯಾಗಿರುತ್ತದೆ.

ಅದರಂತೆ ನೈಸರ್ಗಿಕ ವಿಕೋಪಗಳಿಂದ ಉಂಟಾಗುವ ಹಾನಿಗಳಿಗೆ ನೀಡಬಹುದಾದ ಪರಿಹಾರಗಳ ಕುರಿತು ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Items and Norms of Assistance ಮಾರ್ಗಸೂಚಿಗಳನ್ನು ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023 ರಂದು ಹೊರಡಿಸಿರುತ್ತದೆ. ಸದರಿ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿರುವ ಪರಿಹಾರ ಮೊತ್ತವನ್ನು ಮಾತ್ರ ರಾಜ್ಯ ವಿಪತ್ತು ಪರಿಹಾರ ನಿಧಿಯ ಅನುದಾನದಲ್ಲಿ ಭರಿಸಲು ಅವಕಾಶವಿರುತ್ತದೆ. ಆದ್ದರಿಂದ ಪ್ರಸ್ತುತ 2024-25 ನೇ ಸಾಲಿನ ಮುಂಗಾರು ಹಾಂಗಮಿನಲ್ಲಿ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಭಾರಿ ಮಳೆಯಿಂದ ಉಂಟಾಗುವ ನೈಸರ್ಗಿಕ ವಿಪತ್ತುಗಳಿಗೆ, ಭಾರತ ಸರ್ಕಾರವು ದಿನಾಂಕ:11/07/2023 ರಂದು ಹೊರಡಿಸಿರುವ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿರುವ ಪರಿಹಾರ ಮೊತ್ತದ ಜೊತೆಗೆ ರಾಜ್ಯ ಸರ್ಕಾದಿಂದ ಅರ್ಹತೆಯಂತೆ ಮನೆ/ಹೆಚ್ಚುವರಿ ಮೊತ್ತವನ್ನು ಪಾವತಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶ;

**ಸರ್ಕಾರದ ಆದೇಶ ಸಂಖ್ಯೆ: ಕಂಇ 258 ಟಿಎನ್ಆರ್ 2024,**
**ಬೆಂಗಳೂರು, ದಿನಾಂಕ:01.08.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2024-25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಉಂಟಾಗುವ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಈ ಕೆಳಕಂಡಂತೆ ಪರಿಹಾರವನ್ನು ಪಾವತಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

.....2

1. ಪ್ರವಾಹದಿಂದ ಹಾನಿಗೊಳಗಾದ ಮನೆಗಳನ್ನು 02 ವರ್ಗಗಳಲ್ಲಿ (ಪೂರ್ಣ ಹಾನಿಯಾದ ಮನೆಗಳ ಮರು ನಿರ್ಮಾಣ ಮತ್ತು ಭಾಗಶ: ಹಾನಿಯಾದ ಮನೆಗಳ ದುರಸ್ಥಿ) ವಿಂಗಡಿಸಿ ಪರಿಹಾರ ಪಾವತಿಸುವುದು.

2. ಪೂರ್ಣಹಾನಿಯಾದ ಮನೆಗಳಿಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ರ ಮಾರ್ಗಸೂಚಿಗಳನ್ವಯ ರೂ.1.20 ಲಕ್ಷಗಳ ಪರಿಹಾರದ ಜೊತೆಗೆ ಹೆಚ್ಚುವರಿಯಾಗಿ ವಸತಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ದೇವರಾಜ್ ಅರಸು ವಸತಿ ಯೋಜನೆಯಡಿ ಮನೆ ನೀಡುವುದು. ದೇವರಾಜ್ ಅರಸು ವಸತಿ ಯೋಜನೆಯಡಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸಾಮಾನ್ಯ ವರ್ಗಗಳಿಗೆ ಮಂಜೂರು ಮಾಡುವ ಮನೆಗೆ ರೂ.1.20 ಲಕ್ಷ ಮತ್ತು ಎಸ್‌ಸಿ/ಎಸ್‌ಟಿ ವರ್ಗಗಳಿಗೆ ಮಂಜೂರು ಮಾಡುವ ಮನೆಗೆ ರೂ.1.50 ಲಕ್ಷ ಮಂಜೂರು ಮಾಡುವುದು. ಈ ಮನೆಗಳನ್ನು ಜಿಲ್ಲಾಧಿಕಾರಿಗಳು ಅನುಮೋದನೆ ಮಾಡಿ ವಿವರಗಳೊಂದಿಗೆ ಫಲಾನುಭವಿಗಳ ಪಟ್ಟಿಯನ್ನು RGRHCL ಪರಿಹಾರ ತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳ ಹಂತದಲ್ಲಿಯೆ ವಿವರಗಳನ್ನು ದಾಖಲಿಸುವುದು.

3. ಅನಧಿಕೃತ ಜಮೀನಿನಲ್ಲಿ ಸಂಪೂರ್ಣ ಹಾನಿಗೊಳಗಾದ ಮನೆಗಳಿಗೆ ಒಂದು ಬಾರಿ ಪರಿಹಾರವಾಗಿ ರೂ.1.00 ಲಕ್ಷಗಳನ್ನು ಪಾವತಿಸುವುದು ಮತ್ತು ಯಾವುದೇ ಮನೆಯನ್ನು ಮಂಜೂರು ಮಾಡುವಂತಿಲ್ಲ.

4. ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ರ ಮಾರ್ಗಸೂಚಿಗಳನ್ವಯ ಭಾಗಶಃ ಹಾನಿಗೊಳಗಾದ ಮನೆಗಳ ದುರಸ್ಥಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ರೂ.6,500/-ಗಳ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.43,500/-ಗಳು ಸೇರಿದಂತೆ ಒಟ್ಟು ರೂ.50,000/-ಗಳನ್ನು ಪಾವತಿಸುವುದು.

5. ನೈಸರ್ಗಿಕ ತುರ್ತು ಕಾರ್ಯಗಳಿಗೆ ಜಿಲ್ಲಾಧಿಕಾರಿಗಳ ಪಿಡಿ ಖಾತೆಗೆ ಒದಗಿಸಿರುವ ಅನುದಾನವನ್ನು ನಂತರ ಲೆಕ್ಕ ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

6. ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ / ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ರ ಮಾರ್ಗಸೂಚಿಗಳನ್ವಯ ಪ್ರವಾಹದಿಂದ ಬಟ್ಟೆ ಕಳೆದುಕೊಂಡರೆ ರೂ.2,500/- ಹಾಗೂ ಗೃಹೋಪಯೋಗಿ ವಸ್ತುಗಳನ್ನು ಹಾನಿಯಾದರೆ ರೂ.2,500/- ಗಳ ಪರಿಹಾರ ಪಾವತಿಸಲು ನಿಗದಿಯಾಗಿದ್ದು, ಅದರಂತೆ ರೂ.5,000/- ಗಳನ್ನು ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಪಾವತಿಸುವುದು.

.....3

ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಪುನರ್ ನಿರ್ಮಾಣ / ದುರಸ್ತಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಮೇಲೆ ತಿಳಿಸಿರುವಂತೆ ಪರಿಹಾರವನ್ನು ಈ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟು ಪಾವತಿಸಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಿದೆ.

**ಷರತ್ತುಗಳು:**

1. ಜಿಲ್ಲಾಧಿಕಾರಿಗಳು ಪರಿಹಾರ ಮೊತ್ತವನ್ನು ನಿಯಮಾನುಸಾರ ಅರ್ಹ ಸಂತ್ರಸ್ಥರುಗಳಿಗೆ ನೇರವಾಗಿ ಅವರ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ಡಿಬಿಟಿ ಮೂಲಕ ಪರಿಹಾರವನ್ನು ಪಾವತಿಸಲು ಕ್ರಮವಹಿಸುವುದು.

2. ಅತಿವೃಷ್ಟಿ / ಪ್ರವಾಹದಿಂದ ಮನೆ ಹಾನಿಯ ಬಗ್ಗೆ ಘಟನೆ ನಡೆದ ತಕ್ಷಣ (ಗರಿಷ್ಟ 2 ದಿನಗಳೊಳಗಾಗಿ) ವರದಿಯಾದ 05 ದಿನಗಳ ಒಳಗಾಗಿ ಗ್ರಾಮ ಆಡಳಿತಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗ ಇವರುಗಳು ಜಂಟಿಯಾಗಿ ಸ್ಥಳ ಭೇಟಿ ನೀಡಿ, ಸರ್ವೆ ನಡೆಸಿ, ಹಾನಿ ವಿವರಗಳ ಕುರಿತು ವರದಿಯನ್ನು ತಹಶೀಲ್ದಾರ್‌ರವರಿಗೆ ನೀಡುವುದು.

3. ಮನೆಹಾನಿಯ ಜಂಟಿ ಸಮೀಕ್ಷೆ ವರದಿ ಸ್ವೀಕೃತವಾದ 03 ಕರ್ತವ್ಯದ ದಿನಗಳ ಒಳಗಾಗಿ ತಹಶೀಲ್ದಾರ್‌ರವರು ನಿಯಮಾನುಸಾರ ಪರಿಶೀಲಿಸಿ, ಸದರಿ ವರದಿಯ ಕುರಿತು ಪ್ರಸ್ತಾವನೆಯನ್ನು ಉಪ ವಿಭಾಗಾಧಿಕಾರಿ ಮೂಲಕ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವುದು.

4. ಜಿಲ್ಲಾಧಿಕಾರಿಗಳು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, 07 ಕರ್ತವ್ಯದ ದಿನಗಳ ಒಳಗಾಗಿ ನಿರ್ಧಾರ ಕೈಗೊಂಡು, ಅರ್ಹ ಫಲಾನುಭವಿಗಳಿಗೆ ನಿಯಮಾನುಸಾರ ನೇರವಾಗಿ ಅವರ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ಡಿಬಿಟಿ ಮೂಲಕ ಪರಿಹಾರವನ್ನು ಪಾವತಿಸಲು ಕ್ರಮವಹಿಸುವುದು.

5. ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿರುವ ರಾಜ್ಯ ವಿಪತ್ತು ಪರಿಹಾರ ನಿಧಿ ಅನುದಾನವನ್ನು ಮೇಲೆ ತಿಳಿಸಿರುವ ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿ ಪ್ರಕರಣಗಳಲ್ಲಿ ಪರಿಹಾರ ಪಾವತಿಸಲು ಬಳಸತಕ್ಕದ್ದು.

6. ಜಿಲ್ಲಾಧಿಕಾರಿಗಳು ಆರ್ಥಿಕ ವರ್ಷದ ಅಂತ್ಯಕ್ಕೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸುವುದು.

7. ಸಂತ್ರಸ್ಥರ ಗುರುತಿಸುವಿಕೆಯಲ್ಲಿ ಯಾವುದೇ ರೀತಿಯ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.

8. ಪ್ರತಿ ತಿಂಗಳು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮವಾರು ಫಲಾನುಭವಿಗಳ ವಿವರ, ಪಾವತಿಸಲಾಗದ ಪರಿಹಾರದ ಮೊತ್ತದ ವಿವರಗಳ ಮಾಹಿತಿಯನ್ನು ತಯಾರಿಸಿ, ಸಂಬಂಧಪಟ್ಟ ಜಿಲ್ಲಾ ಕಛೇರಿಗಳಲ್ಲಿ, ತಾಲ್ಲೂಕು ಕಛೇರಿಗಳಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸತಕ್ಕದ್ದು ಮತ್ತು ಸದರಿ ವಿವರಗಳನ್ನು ಎಲ್ಲಾ

.....4

ಜಿಲ್ಲೆಗಳ ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ತಮ್ಮ ಜಾಲತಾಣದಲ್ಲಿ (ವೆಬ್‌ಸೈಟ್‌ನಲ್ಲಿ) ಪಾರದರ್ಶಕತೆಗಾಗಿ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು.

9. ಮನೆಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಅರ್ಹತೆಯನ್ನು ಹಾಗೂ ಮಾಹಿತಿಯನ್ನು ನಮೂದಿಸುವುದರಲ್ಲಿ ಮತ್ತು ಹಣ ಬಳಕೆಯಲ್ಲಿ ಯಾವುದೇ ಲೋಪವಾದಲ್ಲಿ ಸಂಭಂದಪಟ್ಟ ಅಧಿಕಾರಿ/ನೌಕರರನ್ನು ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ವಿವರಗಳನ್ನು ಜಿಲ್ಲಾಧಿಕಾರಿಗಳು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಅನುವಾಗುವಂತೆ, ಸದರಿ ತಂತ್ರಾಂಶವನ್ನು ಈ ಕೂಡಲೇ ಹಾಗೂ ದಿನಾಂಕ:30.09.2024 ರವರೆಗೆ ಸಕ್ರಿಯೆಗೊಳಿಸಲು ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರು ಕ್ರಮವಹಿಸುವುದು.

ಅತಿವೃಷ್ಟಿ / ಪ್ರವಾಹದಿಂದ ದಿನಾಂಕ: 01.06.2024 ರಿಂದ ಇದುವರೆವಿಗೂ ಹಾನಿಯಾಗಿರುವ ಮನೆಗಳ ವಿವರ, ಅರ್ಹ ಫಲಾನುಭವಿಗಳ ವಿವರ, ಪಾವತಿಸಲಾದ ಪರಿಹಾರ ಮೊತ್ತ ಹಾಗೂ ಇನ್ನಿತರೆ ಅಗತ್ಯ ಮಾಹಿತಿಗಳನ್ನು ಹಾಗೂ 30ನೇ ಸೆಪ್ಟೆಂಬರ್ ರವರೆಗೆ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಮನೆ ಹಾನಿಯ ವಿವರಗಳನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಜಿಲ್ಲಾಧಿಕಾರಿಗಳು ಕೂಡಲೇ ಕ್ರಮ ವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 540 ವೆಚ್ಚ-7/2021, ದಿನಾಂಕ:31.07.2024 ರಲ್ಲಿ ನೀಡಿರುವ ಸಹಮತದ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mukhthar Pasha. H-G 1/8/2024

**(ಮುಕ್ತಾರ್ ಪಾಷ. ಹೆಚ್.ಜಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA/(G&SSA) ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಹುಮಹಡಿಕ ಕಟ್ಟಡ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ, ಬೆಂಗಳೂರು.

5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
9. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ ಮತ್ತು ನೋಂ & ಮು) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
10. ಕಂದಾಯ ಇಲಾಖೆ (ವಿ.ನಿ) ಲೆಕ್ಕ ಪತ್ರ ಶಾಖೆ.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.